ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/02/2015-16. ದಿನಾಂಕ:21-06-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಅಡವಿಹಳ್ಳಿ ಗೋಣೆಮ್ಮ ಗಂಡ ಲೇಟ್ ದುರುಗಪ್ಪ<br>2)ಸಣ್ಣ ತಂಗೆಮ್ಮ ಗಂಡ ಲೇಟ್ ರಾಮಚಂದ್ರಪ್ಪ<br>ಹರಾಳು ಗ್ರಾಮ<br>ಕೂಡ್ಲಿಗಿ ತಾಲೂಕು | ಪಕ್ಕೀರಪ್ಪ ತಂದೆ ಲೇಟ್ ರಾಮಚಂದ್ರಪ್ಪ<br>ಕೆ.ಅಯ್ಯನಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಕೆ.ಅಯ್ಯನಹಳ್ಳಿ ಗ್ರಾಮದ ಸನಂ 443ಡಿ. ವಿಸ್ತೀರ್ಣ 6-19. ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಕೆ.ಅಯ್ಯನಹಳ್ಳಿ ಗ್ರಾಮದ ಸನಂ 443ಡಿ. ವಿಸ್ತೀರ್ಣ 6-19. ಎಕ್ರೆ ಜಮೀನನ್ನು ಸದರಿ ತಾಲೂಕು ಹರಾಳು ಗ್ರಾಮದ ಅಡವಿಹಳ್ಳಿ ಗೋಣೆಮ್ಮ ಗಂಡ ಲೇಟ್ ದುರುಗಪ್ಪ ಇವರು ದಿನಾಂಕ 26-09-2014 ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಕೆ.ಅಯ್ಯನಹಳ್ಳಿ ಇವರು ನಮೂನೆ-21 ನೋಟಿಸನ್ನು ದಿನಾಂಕ 06-12-2014 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ಪಕ್ಕೀರಪ್ಪ ತಂದೆ ಲೇಟ್ ರಾಮಚಂದ್ರಪ್ಪ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 45/2014-15. ದಿನಾಂಕ 23-01-2015 ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 13-04-2015 ರಿಂದ 21-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ಹಾಗೂ ಅವರ ಪರ ನ್ಯಾಯಾವಾದಿಗಳು ಹಾಜರಾಗಿರುತ್ತಾರೆ. ಅರ್ಜಿದಾರರು ಕೆ.ಅಯ್ಯನಹಳ್ಳಿ ಗ್ರಾಮದ ಸನಂ 443ಡಿ. ವಿಸ್ತೀರ್ಣ 6-19. ಎಕ್ರೆ ಜಮೀನು ನನ್ನ ತಂದೆಯ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ನಾವುಗಳು ಸದರಿ ಜಮೀನನ್ನು ದಿನಾಂಕ 26-09-2014 ರಂದು ಪಾಲು ವಿಭಾಗದ ಪತ್ರವನ್ನು ಬರೆಯಿಸಿರುತ್ತೇವೆ. ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಅಳತೆ ಮಾಡಿಸಿ 11ಇ. ನಕ್ಷೆಯನ್ನು ಪಡೆದಿರುತ್ತೇವೆ. ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಹಾಗೂ 11ಇ.ನಕ್ಷೆಯಂತೆ ನಮ್ಮಗಳ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರ ಪರ ನ್ಯಾಯಾವಾದಿಗಳು ಹಾಜರಾಗಿದ್ದು ಸದರಿ ವಿವಾದಿತ ಜಮೀನಿನಲ್ಲಿ ಪ್ರತಿವಾದಿಗಳ ಪಿತ್ರಾರ್ಜಿತ ಜಮೀನು ಆಗಿದ್ದು ಅದರಲ್ಲಿ ಅವರಿಗೆ ಪಾಲು ಇರುವುದರಿಂದ ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ನಮ್ಮ ತಕರಾರು ಇರುವುದಾಗಿ ಕೋರಿರುತ್ತಾರೆ.

ದಿನಾಂಕ 31-05-2016 ರಂದು ವಿಚಾರಣೆಯಲ್ಲಿ ಉಭಯರು ಹಾಜರಾಗಿದ್ದು ಸದರಿ ವಿವಾದಿತ ಜಮೀನಿನ ಉಭಯರು ರಾಜಿಯಾಗಿ ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಅರ್ಜಿದಾರರ ಹೆಸರಲ್ಲಿ ಖಾತಾ

ಬದಲಾವಣೆ ಮಾಡಲು ನಮ್ಮ ಸಂಪೂರ್ಣ ಒಪ್ಪಿಗೆ ಇರುತ್ತದೆಯೇಂದು ಖಾತಾ ಬದಲಾವಣೆಗೆ ಯಾವುದೇ ಆಕ್ಷೇಪಣೆಗಳು ಇರುವುದಿಲ್ಲವೆಂದು ಒಪ್ಪಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರು ಮತ್ತು ತಕರಾರುದರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ಸದರಿ ಜಮೀನಿನ ಬಗ್ಗೆ ಗ್ರಾಮಲೆಕ್ಕಿಗರು ಗ್ರಾಮದಲ್ಲಿ ಮರು ವಿಚಾರಣೆ ಮಾಡಲಾಗಿ ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ಹೇಳಿಕೆ ನೀಡಿರುತ್ತಾರೆ. ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

**-:ಆದೇಶ:-**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಕೆ.ಅಯ್ಯನಹಳ್ಳಿ ಗ್ರಾಮದ ಸನಂ 443ಡಿ. ವಿಸ್ತೀರ್ಣ 6-19. ಎಕ್ರೆ ಜಮೀನನ್ನು ದಿನಾಂಕ 26-09-2014 ರ ಪಾಲು ವಿಭಾಗದ ಪತ್ರ ಹಾಗೂ 11ಇ. ನಕ್ಷೇ ಪ್ರಕಾರ

| ಕ್ರಸಂ | ಹೆಸರು | ಸನಂ | ವಿಸ್ತೀರ್ಣ |
|---|---|---|---|
| 01 | ಅಡವಿಹಳ್ಳಿ ಗೋಣೆಮ್ಮ ಗಂಡ ಲೇಟ್ ದುರುಗಪ್ಪ | 443ಡಿಪೈಕಿ, | 3-53. |
| 02 | ಸಣ್ಣ ತಂಗೆಮ್ಮ ಗಂಡ ಲೇಟ್ ರಾಮಚಂದ್ರಪ್ಪ<br>ದುರುಗಮ್ಮ ಗಂಡ ಲೇಟ್ ಸಣ್ಣ ತಿಂದಪ್ಪ<br>ಪಕ್ಕೀರಪ್ಪ ತಂದೆ ಲೇಟ್ ರಾಮಚಂದ್ರಪ್ಪ | 443ಡಿಪೈಕಿ | 2-66 |

ಈ ಮೇಲಿನಂತೆ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ. ಹಾಗೂ ಮುದ್ರಾಂಕ ಶುಲ್ಕ ಪಾವತಿಸಲು ಸಹಾ ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 21-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಹೊಸಹಳ್ಳಿ
ಕೂಡ್ಲಿಗಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಅಡವಿಹಳ್ಳಿ ಗೋಣೆಮ್ಮ ಗಂಡ ಲೇಟ್ ದುರುಗಪ್ಪ. ಸಣ್ಣ ತಂಗೆಮ್ಮ ಗಂಡ ಲೇಟ್ ರಾಮಚಂದ್ರಪ್ಪ ಹರಾಳು ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಪಕ್ಕೀರಪ್ಪ ತಂದೆ ಲೇಟ್ ರಾಮಚಂದ್ರಪ್ಪ ಕೆ.ಅಯ್ಯನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರ ಪರ ವಕೀಲರಾದ ಕೆ.ಅಂಜೀನಪ್ಪ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.